# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **540** |
| ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 30-01-2026 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಕೃಷಿ ಆರ್ಥಿಕತೆಯಲ್ಲಿ ಭತ್ತವು ಒಂದು ಪ್ರಮುಖ ಆಹಾರ ಧಾನ್ಯವಾಗಿದ್ದು, ಉತ್ತರ ಕರ್ನಾಟಕ ಭಾಗದ ರಾಯಚೂರು, ಕೊಪ್ಪಳ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಹೆಚ್ಚು ಪ್ರಮಾಣದ ಭತ್ತದ ಬೆಳೆಯನ್ನು ಬೆಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬೆಳೆಯ ಸಂಶೋಧನೆ, ಸೂಕ್ತ ಮಾರುಕಟ್ಟೆ ವ್ಯವಸ್ಥೆ, ಬೆಲೆ ಸ್ಥಿರತೆ ಹಾಗೂ ರೈತರ ಹಿತಾಸಕ್ತಿಯ ರಕ್ಷಣೆಗಾಗಿ 'ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ' ಹಾಗೂ 'ಕಾಫಿ ಅಭಿವೃದ್ಧಿ ಮಂಡಳಿ'ಯ ರೀತ್ಯಾ ಭತ್ತದ ಬೆಳೆಗೆ ಪ್ರತ್ಯೇಕವಾಗಿ ರಾಯಚೂರು ಜಿಲ್ಲೆಯಲ್ಲಿ 'ಕರ್ನಾಟಕ ಭತ್ತ ಅಭಿವೃದ್ಧಿ ಮಂಡಳಿ'ಯನ್ನು ಸ್ಥಾಪಿಸುವ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಕೃಷಿ ವಿಶ್ವ ವಿದ್ಯಾನಿಲಯಗಳು ಮತ್ತು ಅನೇಕ ಕೃಷಿ ಸಂಶೋಧನಾ ಕೇಂದ್ರಗಳು ಭತ್ತದ ತಾಂತ್ರಿಕತೆಗಳ ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ತೊಡಗಿರುತ್ತವೆ.<br><br>ರಾಯಚೂರು ಕೃಷಿವಿಶ್ವವಿದ್ಯಾನಿಲಯ ವ್ಯಾಪ್ತಿಯ ಕೃಷಿ ಸಂಶೋಧನಾ ಕೇಂದ್ರ ಗಂಗಾವತಿ ಇಲ್ಲಿ ಪ್ರಮುಖವಾಗಿ ಭತ್ತದ ತಳಿ ಅಭಿವೃದ್ಧಿ ಮತ್ತು ಸಂಶೋಧನೆ ಕಾರ್ಯನಿರ್ವಹಿಸಲಾಗುತ್ತಿದೆ. ವಿಶ್ವ ವಿದ್ಯಾನಿಲಯದ ಕೃಷಿವಿಜ್ಞಾನ ಕೇಂದ್ರವೂ ಸಹ ಗಂಗಾವತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ರೈತರಿಗೆ ತರಬೇತಿ ಮತ್ತು ಅವಶ್ಯಕ ಮಾಹಿತಿ ನೀಡುವ ವ್ಯವಸ್ಥೆಯಿರುತ್ತದೆ.<br><br>ಕರ್ನಾಟಕ ರಾಜ್ಯ ಬೀಜ ನಿಗಮ ಹಾಗೂ ಕೃಷಿ ವಿಶ್ವವಿದ್ಯಾಲಯಗಳು ಉತ್ತಮ ಗುಣಮಟ್ಟದ ಭತ್ತದ ಬೀಜವನ್ನು ಉತ್ಪಾದಿಸಿ ರೈತರಿಗೆ ವಿತರಿಸುತ್ತಿವೆ.<br><br>ರಾಜ್ಯದಲ್ಲಿ ಭತ್ತವನ್ನು ಸಾರ್ವಜನಿಕ ವಿತರಣೆ ಮತ್ತು ಇತರೆ ಯೋಜನೆಗಳಡಿ ಬಳಸಿಕೊಳ್ಳಲು ಸಾಕಷ್ಟು ಪ್ರಮಾಣದಲ್ಲಿ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಲು ಅವಕಾಶವಿರುತ್ತದೆ. ಅಲ್ಲದೆ, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ (KAPPEC) ಮತ್ತು Agricultural and Processed Food Products Export Development Authority (APEDA) ಸಂಸ್ಥೆಗಳು ಕೃಷಿ ಉತ್ಪನ್ನಗಳ ರಫ್ತು |

| | | |
|---|---|---|
| | | ಉತ್ತೇಜಿಸುವ ನಿಟ್ಟಿನಲ್ಲಿ ಸಕ್ರಿಯವಾಗಿ ಕಾರ್ಯ ನಿರ್ವಹಿಸುತ್ತಿವೆ.<br>ಈ ಕಾರಣಗಳಿಂದಾಗಿ 'ಭತ್ತ ಅಭಿವೃದ್ಧಿ ಮಂಡಳಿ' ಸ್ಥಾಪಿಸುವ ಉದ್ದೇಶವು ಸಧ್ಯದಲ್ಲಿ ಸರ್ಕಾರದ ಮುಂದಿರುವುದಿಲ್ಲ. |
| ಇ) | ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರದ ನಿಲುವೇನು; | ಉದ್ಭಯಿಸುವುದಿಲ್ಲ. |
| ಈ) | ರಾಜ್ಯ ಸರ್ಕಾರದಿಂದ ಯಾವ ಕಾಲಮಿತಿಯೊಳಗೆ ರಾಯಚೂರು ಜಿಲ್ಲೆಯಲ್ಲಿ ಭತ್ತ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಲಾಗುತ್ತದೆ? (ಮಾಹಿತಿ ನೀಡುವುದು) | ಉದ್ಭಯಿಸುವುದಿಲ್ಲ. |

*ಕಡತ ಸಂಖ್ಯೆ:ಕೃ ಇ 25 ಎಎಂಎಸ್ 2026*

(ಎನ್.ಚಲುವರಾಯಸ್ವಾಮಿ)
ಕೃಷಿ ಸಚಿವರು